**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**27.12.2024** **18.40 hrs**

**<><*<><>*><>**

ಮುಖ್ಯಾಂಶಗಳು

- **ಡಾ.ಮನಮೋಹನ್ ಸಿಂಗ್ ಅವರು ಜಗತ್ತಿನ ಶ್ರೇಷ್ಠ ಆರ್ಥಿಕ ತಜ್ಞರಲ್ಲಿ ಒಬ್ಬರು- ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಮಾಜಿ ಪ್ರಧಾನಮಂತ್ರಿ ಡಾ.ಮನಮೋಹನ್ ಸಿಂಗ್ ನಿಧನ; ರಾಜ್ಯದ ಗಣ್ಯರಿಂದ ಸಂತಾಪ**
- **ಇದೇ ೨೯ ರಂದು ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಮರು ಪರೀಕ್ಷೆಗೆ ಸಿದ್ಧತೆ**
- **ಹುಬ್ಬಳ್ಳಿ ಸಿಲಿಂಡರ್ ಸ್ಫೋಟ ಪ್ರಕರಣ; ಮೃತರ ಸಂಖ್ಯೆ ನಾಲ್ಕಕ್ಕೆ ಏರಿಕೆ**

**<><*<><>*><>**

ಜನಪರ ನೂತನ ಅಭಿವೃದ್ಧಿ ಯೋಜನೆಗಳನ್ನು ಪರಿಚಯಿಸಿ ಅನುಷ್ಠಾನಗೊಳಿಸಿದ ದೀಮಂತ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ನಿಧನದ ಹಿನ್ನೆಲೆಯಲ್ಲಿ ಇಂದು ಬೆಳಗಾವಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮ ಜರುಗಿತು. ಗಾಂಧೀ ಭಾರತ ಕಾರ್ಯಕ್ರಮ ನಿಮಿತ್ತ ಆಯೋಜಿಸಲಾಗಿದ ಕಾಂಗ್ರೆಸ್ ಸಮಾವೇಶವನ್ನು ರದ್ದುಗೊಳಿಸಿ, ಅದೇ ವೇದಿಕೆಯ ಮೇಲೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಂತರ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಡಾ.ಮನಮೋಹನ್ ಸಿಂಗ್ ಅವರು ಜಗತ್ತಿನ ಶ್ರೇಷ್ಠ ಆರ್ಥಿಕ ತಜ್ಞರಲ್ಲಿ ಒಬ್ಬರಾಗಿದ್ದರು, ತುಂಬಾ ಸರಳಜೀವಿ ಪ್ರಾಮಾಣಿಕ ಪ್ರಧಾನಿ, ಜಗತ್ತಿನ ಆರ್ಥಿಕ ಪರಿಸ್ಥಿತಿಯನ್ನು ಗಮನಿದಲ್ಲಿಟ್ಟುಕೊಂಡು ದೇಶದ ಆರ್ಥಿಕ ಪರಿಸ್ಥಿತಿ ನಿಭಾಯಿಸಿದವರು ಎಂದು ಸ್ಮರಿಸಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

**<><*<><>*><>**

ಮಾಜಿ ಪ್ರಧಾನಮಂತ್ರಿ ಡಾ.ಮನಮೋಹನ್ ಸಿಂಗ್ ನಿಧನ ಹಿನ್ನೆಲೆಯಲ್ಲಿ ರಾಜ್ಯದ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನಕ್ಕೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸಂತಾಪ ವ್ಯಕ್ತಪಡಿಸಿದ್ದಾರೆ. ದೇಶದ ಆರ್ಥಿಕತೆಗೆ ಹಾಗೂ ಪ್ರಗತಿಗೆ ಡಾ.ಮನಮೋಹನ್ ಸಿಂಗ್ ಅವರ ನೀಡಿದ್ದ ಕೊಡುಗೆ ಅಪಾರವಾಗಿದೆ. ಅವರ ಆತ್ಮಕ್ಕೆ ಶಾಂತಿ ಕರುಣಿಸಲೆಂದು ಹಾಗೂ ಕುಟುಂಬಸ್ಥರಿಗೆ, ಅಭಿಮಾನಿಗಳಿಗೆ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಹೇಳಿದ್ದಾರೆ. ಹಾಸನ ಜಿಲ್ಲೆಯಲ್ಲಿ ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ

ಡಾ.ಮನಮೋಹನ್ ಸಿಂಗ್ ಅವರಿಗೆ ಇಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ದೇಶದ ಆರ್ಥಿಕತೆ ಸುಧಾರಣೆಯಲ್ಲಿ ಅರ್ಥಶಾಸ್ತ್ರಜ್ಞರಾಗಿದ್ದ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಪಾತ್ರ ಮಹತ್ವಾಗಿದ್ದು, ದೇಶದ ಆರ್ಥಿಕ ಬೆಳವಣಿಗೆಗೆ ಬಹುದೊಡ್ಡ ಕೊಡುಗೆ ಕೊಟ್ಟಿದ್ದು, ಅವರ ಅಗಲಿಕೆ ಇಡೀ ದೇಶಕ್ಕೆ ತುಂಬಲಾರದ ನಷ್ಟ ಆಗಿದೆ ಎಂದು ತುಮಕೂರು ಜಿಲ್ಲೆಯ ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗಸ್ವಾಮೀಜಿ ಅವರು ಸ್ಮರಿಸಿದ್ದಾರೆ. ನಮ್ಮ ದೇಶದ ಆರ್ಥಿಕ ಪರಿಸ್ಥಿತಿ ಸಂಕಷ್ಟದಲ್ಲಿದ್ದಾಗ ಹಣಕಾಸು ಸಚಿವರಾಗಿ ಡಾ.ಮನಮೋಹನ್ ಸಿಂಗ್ ಅವರು, ಸಮರ್ಥವಾಗಿ ಕಾರ್ಯ ನಿರ್ವಹಿಸುವುದರ ಮೂಲಕ ಅರ್ಥ ವ್ಯವಸ್ಥೆಯನ್ನು ಸರಿದಾರಿಗೆ ತರುವಲ್ಲಿ ಯಶಸ್ವಿಯಾದರು ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ಬೆಂಗಳೂರಿನ ಜೆಡಿಎಸ್ ಪಕ್ಷದ ರಾಜ್ಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಸಮರ್ಪಣೆ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ಇಂದು ಗದಗ ನಗರದ ಬಿಜೆಪಿ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿರವರ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಮೌನಾಚರಣೆಯ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

**<><*<><>*><>**

ಮಾಜಿ ಪ್ರಧಾನಮಂತ್ರಿ ಡಾ.ಮನಮೋಹನ್ ಸಿಂಗ್ ನಿಧನ ಹಿನ್ನೆಲೆ ರಾಜ್ಯದ್ಯಂತ ಶೋಕಾಚರಣೆ ಇರುವ ಕಾರಣ ಮೈಸೂರು ಅರಮನೆ ಆವರಣದಲ್ಲಿ ನಡೆಯುವ ನೂತನ ಹೊಸ ವರ್ಷಾಚರಣೆ ಕಾರ್ಯಕ್ರಮವನ್ನು ರದ್ದುಗೊಳಿಸಲಾಗಿದೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಶೋಕಾಚರಣೆ ಜಾರಿಯಲ್ಲಿರುವ ಕಾರಣ ಈ ನಿರ್ಧಾರ ಮಾಡಲಾಗಿದೆ. ಕಳೆದ ವಾರದಿಂದ ಮೈಸೂರು ಅರಮನೆಯಲ್ಲಿ ಮಾಗಿ ಉತ್ಸವದ ಅಂಗವಾಗಿ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ಇದು ಎಂದಿನಂತೆ ರಾತ್ರಿ ೯ ಗಂಟೆಯ ತನಕ ನಡೆಯಲಿದೆ. ಆದರೆ ಇಂದು ಮತ್ತು ನಾಳೆ ಏರ್ಪಡಿಸಲಾಗಿದ್ದ ದೀಪಾಲಂಕಾರವನ್ನು ಮಾತ್ರ ರದ್ದುಪಡಿಸಲಾಗಿದೆ ಎಂದು ಮೈಸೂರು ಅರಮನೆ ಮಂಡಳಿ ಉಪ ನಿರ್ದೇಶಕ ಸುಬ್ರಮಣ್ಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ದಾವಣಗೆರೆಯ ೧೯ ಕೇಂದ್ರಗಳಲ್ಲಿ ಇದೇ ೨೯ ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ ೨೦೨೩-೨೪ ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್‌ನ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಮರು ಪರೀಕ್ಷೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಮರು ಪರೀಕ್ಷೆಯ ಸಿದ್ಧತಾ ಸಭೆ ಹಾಗೂ ಪರೀಕ್ಷಾ ಕೇಂದ್ರಗಳ ಪರಿವೀಕ್ಷಕರು, ಮಾರ್ಗಾಧಿಕಾರಿಗಳು ಮತ್ತು ವೀಕ್ಷಕರಿಗೆ ಏರ್ಪಡಿಸಿದ್ದ

ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ಮತ್ತು ಯಾವುದೇ ದೂರುಗಳು ಬಾರದಂತೆ ನಡೆಸಲು ಆಯೋಗದ ನಿರ್ದೇಶನಗಳನ್ನು ಪಾಲಿಸಬೇಕು ಎಂದರು. ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ, ಆಸನದ ವ್ಯವಸ್ಥೆ, ಬಂದೋಬಸ್ತ್ ಸೇರಿದಂತೆ ಎಲ್ಲವನ್ನೂ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು.

<><*<><>*><>

೨೦೨೩-೨೪ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಮತ್ತು ಬಿ ವೃಂದದ ಹುದ್ದೆಗೆ ಇದೇ ೨೯ರಂದು ನಡೆಯಲಿರುವ ಮರು ಪರೀಕ್ಷೆಯಲ್ಲಿ ಅವ್ಯವಹಾರ ಮತ್ತು ಲೋಪದೋಷಗಳಾಗದಂತೆ ಎಚ್ಚರವಹಿಸಬೇಕು. ತಪ್ಪುಗಳಾದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುತ್ತದೆ ಎಂದು ಉತ್ತರಕನ್ನಡ ಜಿಲ್ಲೆಯ ಹೆಚ್ಚುವರಿ ಜಿಲ್ಲಾಧಿಕಾರಿ ಸಾಜಿದ್ ಅಹ್ಮದ್ ಮುಲ್ಲಾ ಹೇಳಿದರು. ಜಿಲ್ಲೆಯ ೪ ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು ೧ ಸಾವಿರದ ೪೭೦ ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಮರು ಪರೀಕ್ಷೆ ನಡೆಯುವ ಸಂಬಂಧ ಕರ್ನಾಟಕ ಲೋಕಸೇವಾ ಆಯೋಗವು ಹೊರಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಅವರು ಸೂಚಿಸಿದ್ದಾರೆ.

<><*<><>*><>

ಹವ್ಯಕ ಸಮುದಾಯವು ದೇಶದ ಚಿಂತನೆಗೆ ಪೂರಕವಾಗಿ ಬದುಕುತ್ತಿರುವ ಮಾದರಿ ಸಮಾಜ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯುತ್ತಿರುವ ತೃತೀಯ ವಿಶ್ವ ಹವ್ಯಕ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಡಿಮೆ ಜನಸಂಖ್ಯೆ ಹೊಂದಿದ ಹವ್ಯಕ ಸಮುದಾಯದ ವಿಶಿಷ್ಟ ಸಾಧನೆ ಮತ್ತು ಸಮಾಜಕ್ಕೆ ನೀಡುತ್ತಿರುವ ಕೊಡುಗೆಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು ಎಂದರು. ಸ್ವಾಭಿಮಾನಿ ಹಾಗೂ ಸೌಹಾರ್ದಯುತ ಮಾದರಿ ಬದುಕಿಗೆ ಹೆಸರಾಗಿರುವ ಹವ್ಯಕ ಸಮಾಜ ವಿಶ್ವಮಟ್ಟದ ಸಮ್ಮೇಳನದ ಮೂಲಕ ಸಮುದಾಯದ ವಿಶಿಷ್ಟತೆಯನ್ನು ಜಗತ್ತು ನೋಡುವಂತಾಗಿದೆ ಎಂದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಜಗದ್ಗುರು ಶಂಕರಾಚಾರ್ಯ ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು, ಮಂತ್ರಾಲಯದ ಸುಬುಧೇಂದ್ರ ತೀರ್ಥ ಶ್ರೀಗಳು, ಪರಮಪೂಜ್ಯ ಯತಿರಾಜ ಜೀ ಶ್ರೀಗಳು ವಹಿಸಿದ್ದರು.  ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿ ಇತರೆ ಗಣ್ಯರು ಭಾಗವಹಿಸಿದ್ದರು.

<><*<><>*><>

ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೋನಿಯಲ್ಲಿ ಇತ್ತೀಚೆಗೆ ಸಂಭವಿಸಿದ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಮೃತಪಟ್ಟವರ ಸಂಖ್ಯೆ ನಾಲ್ಕಕ್ಕೆ ಏರಿಕೆಯಾಗಿದೆ. ೯ ಅಯ್ಯಪ್ಪ ಮಾಲಾಧಾರಿಗಳ ಪೈಕಿ ಚಿಕಿತ್ಸೆ ಫಲಕಾರಿಯಾಗದೆ ಇಂದು ಸಂಜೆ ಗಾಯಾಳು ಲಿಂಗರಾಜ ಸಿದ್ದಪ್ಪ

ಬಿರನೂರ ಮೃತಪಟ್ಟಿದ್ದಾರೆ. ಕಳೆದ ಭಾನುವಾರ ರಾತ್ರಿ ನಡೆದಿದ್ದ ಗ್ಯಾಸ್ ಸೋರಿಕೆಯಾಗಿ ಸಿಲಿಂಡರ್ ಸ್ಫೋಟಗೊಂಡು ೯ ಜನ ಮಾಲಾಧಾರಿಗಳು ಗಾಯಗೊಂಡಿದ್ದರು. ಇಂದು ಬೆಳಗ್ಗೆ ರಾಜು ಮೂಗೇರ ಎಂಬ ಮಾಲಾಧಾರಿ ಸಾವನ್ನಪಿದ್ದರೆ, ನಿನ್ನೆ ನಿಜನಿಂಗಪ್ಪ ಬೇಪೂರಿ ಹಾಗೂ ಸಂಜಯ ಸವದತ್ತಿ ಎಂಬ ಇಬ್ಬರು ಮಾಲಾಧಾರಿಗಳು ಸಾವನ್ನಪ್ಪಿದ್ದರು. ಇನ್ನೂ ಐವರ ಚಿಕಿತ್ಸೆ ಕೆಎಂಸಿಆರ್‌ಐ ನಲ್ಲಿ ಮುಂದುವರೆದಿದ್ದು, ಅವರಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿದ್ದು, ಓರ್ವನಲ್ಲಿ ಚೇತರಿಕೆ ಕಂಡಿದೆ. ಬೆಳಗ್ಗೆ ವಿಷಯ ತಿಳಿಯುತ್ತಿದಂತೆ ಜಿಲ್ಲಾ ಉಸ್ತುವಾರಿ ಸಂತೋಷ ಲಾಡ್ ಕಿಮ್ಸ್‌ಗೆ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದ ಬಳಿಕ ಮಾತನಾಡಿ, ಗಾಯಾಳುಗಳನ್ನು ಉಳಿಸಿಕೊಳ್ಳಲು ಎಲ್ಲಾ ಪ್ರಯತ್ನ ಮಾಡಲಾಗುತ್ತಿದೆ. ಈಗಾಗಲೇ ೫ ಲಕ್ಷ ರುಪಾಯಿ ಪರಿಹಾರ ಘೋಷಣೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ: ಸಂತೋಷ್ ಲಾಡ್**

**<><*<><>*><>**

ವಿಜಯನಗರ ಜಿಲ್ಲೆಯ ವಿವಿಧ ತಾಲೂಕಿನಲ್ಲಿ ಖಾಲಿಯಿದ್ದ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕರ ಹುದ್ದೆಗಳಿಗೆ ಸಲ್ಲಿಸಿದ್ದ ಅಪೂರ್ಣಗೊಂಡ ಅರ್ಜಿಗಳನ್ನು ಮರು ಸಲ್ಲಿಸಲು ಅವಕಾಶ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಎಸ್.ಶ್ವೇತಾ ತಿಳಿಸಿದ್ದಾರೆ. ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರು ಜಿಲ್ಲೆಯ ಎಲ್ಲಾ ೬ ತಾಲೂಕುಗಳಾದ ಹೂವಿನಹಡಗಲಿ, ಹಗರಿಬೊಮ್ಮನಹಳ್ಳಿ, ಹೊಸಪೇಟೆ, ಕೂಡ್ಲಿಗಿ, ಹರಪನಹಳ್ಳಿ, ಕೊಟ್ಟೂರು ತಾಲೂಕಿನಲ್ಲಿ ಈಗಾಗಲೇ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಅರ್ಜಿ ಸಲ್ಲಿಸುವ ವೇಳೆಯಲ್ಲಿ ಕೆಲವು ತಾಂತ್ರಿಕ ಸಮಸ್ಯೆಯಿಂದಾಗಿ ಬಹುತೇಕ ಅರ್ಜಿಗಳಲ್ಲಿ ಭಾವಚಿತ್ರ, ಸಹಿ ಸೇರಿದಂತೆ ಹಲವು ಲೋಪ ದೋಷಗಳು ಉಂಟಾಗಿ ಅರ್ಜಿಗಳು ಅಪೂರ್ಣಗೊಂಡಿವೆ ಹಾಗಾಗಿ ಇದೇ ೨೬ ರಿಂದ ಜನವರಿ ೫ ರವರೆಗೆ ಮರು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಹೊಸ ವರ್ಷ ಸಂಭ್ರಮಾಚರಣೆರ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಕುಮಾರ್ ಜಿ.ಕೆ ನೇತೃತ್ವದಲ್ಲಿ, ಶಿವಮೊಗ್ಗ ಜಿಲ್ಲೆಯ ಎಲ್ಲಾ ಹೋಂ ಸ್ಟೇ, ಹೋಟೆಲ್, ಲಾಡ್ಜ್, ಮತ್ತು ರೆಸಾರ್ಟ್‌ಗಳ ಮಾಲೀಕರು ಹಾಗೂ ವ್ಯವಸ್ಥಾಪಕರ ಸಭೆಯನ್ನು ನಡೆಸಿ ಸಲಹೆ ಸೂಚನೆಗಳನ್ನು ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**